ಕರ್ನಾಟಕ ಸರ್ಕಾರ

**Department of Collegiate Education**
Government of Karnataka

ಸಂಖ್ಯೆ:ಕಾಶಿಇ/ಮಾತಂವಿ/24/ಸಾಮಾನ್ಯ/2016-17

ಕಾಲೇಜು ಶಿಕ್ಷಣ ಆಯುಕ್ತರಕಛೇರಿ
ಬೆಂಗಳೂರು, ದಿನಾಂಕ: 07/01/2017.

# ಸುತ್ತೋಲೆ

ಇಲಾಖಾವ್ಯಾಪ್ತಿಯ ಕಾಲೇಜುಗಳಲ್ಲಿ ವಿವೇಕಾನಂದ ಜಯಂತಿಯನ್ನು ಆಚರಿಸುವ ಸಂಬಂಧ ಹಾಗೂ ಐ.ಸಿ.ಟಿ. ಕಾರ್ಯ ಚಟುವಟಿಕೆಗಳ ಅನುಷ್ಠಾನದ ಕುರಿತಾಗಿ ಪ್ರಾದೇಶಿಕ ಜಂಟಿ ನಿರ್ದೇಶಕರು ಮತ್ತು ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರೊಂದಿಗೆ ದಿನಾಂಕ:09/01/2017ರಂದು ಬೆಳಗ್ಗೆ 10.00 ಗಂಟೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಕರ್ನಾಟಕ ಸರ್ಕಾರ ಹಾಗೂ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ವಿಡಿಯೋ ಕಾನ್ಫರೆನ್ಸ್ ಮೂಲಕ ನೇರಸಂವಾದ ಕಾರ್ಯಕ್ರಮವನ್ನು ನಡೆಸಲು ಉದ್ದೇಶಿಸಿರುತ್ತಾರೆ.

ಪ್ರಯುಕ್ತ ಸದರಿ ದಿನದಂದು ಇಲಾಖಾವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು ಮತ್ತು ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರು ಸಂಬಂಧಿಸಿದ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಲಭ್ಯವಿರುವ KSWAN ಸೌಲಭ್ಯದ ಮೂಲಕ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ತಿಳಿಸಲಾಗಿದೆ.

***(ಆಯುಕ್ತರ ಆದೇಶದನ್ವಯ)***

Shilpa

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

**ಇವರಿಗೆ**

1. ಕಾಲೇಜು ಶಿಕ್ಷಣ ಇಲಾಖಾವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಹಿತಿ ಮತ್ತು ಅಗತ್ಯಕ್ರಮಕ್ಕಾಗಿ ಕಳುಹಿಸುತ್ತಾ ತಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯನ್ನು ಇಂದೇ ಸಂಪರ್ಕಿಸಿ ಜಿಲ್ಲಾಧಿಕಾರಿಗಳನ್ನು ಕೋರಲಾಗಿರುವ ಪತ್ರವನ್ನು ಸಲ್ಲಿಸಿ ಅನುಮತಿಯನ್ನು ಪಡೆದುಕೊಳ್ಳಲು ಸೂಚಿಸಿದೆ.
2. ಕಾಲೇಜು ಶಿಕ್ಷಣ ಇಲಾಖಾವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿನಿರ್ದೇಶಕರುಗಳಿಗೆ ಮಾಹಿತಿ ಮತ್ತು ಅಗತ್ಯಕ್ರಮಕ್ಕಾಗಿ.

**ಪ್ರತಿಯನ್ನು**

1. ಮಾನ್ಯ ಆಯುಕ್ತರ ಆಪ್ತಶಾಖೆಗೆ ಮಾಹಿತಿಗಾಗಿ.
2 ಕಾಲೇಜು ಶಿಕ್ಷಣ ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರು/ಜಂಟಿ ನಿರ್ದೇಶಕರ ಆಪ್ತಶಾಖೆಗೆ ಮಾಹಿತಿಗಾಗಿ.
3 ಕಛೇರಿಪ್ರತಿ

ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ:ಕಾಶಿಇ/ಮಾತಂವಿ/24/ಸಾಮಾನ್ಯ/2016-17

ಕಾಲೇಜು ಶಿಕ್ಷಣ ಆಯುಕ್ತರಕಛೇರಿ
ಬೆಂಗಳೂರು, ದಿನಾಂಕ: 07/01/2017.

ಇವರಿಗೆ

**ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳು**
**ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳು**

ಮಾನ್ಯರೆ

ಕಾಲೇಜು ಶಿಕ್ಷಣ ಇಲಾಖಾವ್ಯಾಪ್ತಿಯ ಕಾಲೇಜುಗಳಲ್ಲಿ ವಿವೇಕಾನಂದ ಜಯಂತಿಯನ್ನು ಆಚರಿಸುವ ಸಂಬಂಧ ಹಾಗೂ ಐ.ಸಿ.ಟಿ. ಕಾರ್ಯ ಚಟುವಟಿಕೆಗಳ ಅನುಷ್ಠಾನದ ಕುರಿತಾಗಿ ಪ್ರಾದೇಶಿಕ ಜಂಟಿ ನಿರ್ದೇಶಕರು ಮತ್ತು ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರೊಂದಿಗೆ ದಿನಾಂಕ:09/01/2017ರಂದು ಬೆಳಗ್ಗೆ 10.00 ಗಂಟೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಕರ್ನಾಟಕ ಸರ್ಕಾರ ಹಾಗೂ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ವಿಡಿಯೋ ಕಾನ್ಫರೆನ್ಸ್ ಮೂಲಕ ನೇರಸಂವಾದ ಕಾರ್ಯಕ್ರಮವನ್ನು ನಡೆಸಲು ಉದ್ದೇಶಿಸಿರುತ್ತಾರೆ. ಪ್ರಯುಕ್ತ ಸದರಿ ದಿನದಂದು ಬೆಳಗ್ಗೆ 9.30 ರಿಂದ 12.00 ಗಂಟೆಯವರೆಗೆ ತಮ್ಮ ಕಛೇರಿಯಲ್ಲಿ ಲಭ್ಯವಿರುವ KSWAN ಸೌಲಭ್ಯದ ಮೂಲಕ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಪಾಲ್ಗೊಳ್ಳಲು ತಮ್ಮ ಜಿಲ್ಲಾ ವ್ಯಾಪ್ತಿಯ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರು ಮತ್ತು ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರಿಗೆ ಅನುಮತಿಯನ್ನು ನೀಡಬೇಕೆಂದು ತಮ್ಮನ್ನು ಕೋರಲಾಗಿದೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

Sulpal

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**